# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಮಂಗಳವಾರ, ೧೨ ಆಗಸ್ಟ್, ೨೦೨೫ (ಶ್ರಾವಣ ೨೧, ಶಕವರ್ಷ ೧೯೪೭)<br>BENGALURU, TUESDAY, 12 AUGUST, 2025 (SHRAVANA 21, SHAKAVARSHA 1947) | ನಂ. ೪೫೪<br>No. 454 |
|---|---|---|


**ಕರ್ನಾಟಕ ವಿಧಾನಸಭೆ**

**ಹದಿನಾರನೇ ವಿಧಾನಸಭೆ**

**ಏಳನೇ ಅಧಿವೇಶನ**

## ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–30)**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ:

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪದಾವಳಿಯ ಪ್ರತಿಯೋಜನೆ.-** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ರಲ್ಲಿ "ಬೆಂಗಳೂರು ನಗರ ವಿಶ್ವವಿದ್ಯಾನಿಲಯ" ಎಂಬ ಪದಗಳು ಬರುವ ಕಡೆಗಳಲ್ಲೆಲ್ಲಾ "ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ" ಎಂಬ ಅಕ್ಷರಗಳನ್ನು ಮತ್ತು ಪದಗಳನ್ನು ಪ್ರತಿಯೋಜಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ರಾಷ್ಟ್ರದಲ್ಲಿ ಆರ್ಥಿಕ ಸುಧಾರಣೆಗಳನ್ನು ಮುನ್ನಡೆಸಿದ ಹಾಗೂ ಸತತವಾಗಿ ಎರಡು ಅವಧಿಗೆ ಭಾರತದ ಪ್ರಧಾನಿಯಾಗಿ ಸೇವೆ ಸಲ್ಲಿಸಿದ ಪ್ರಸಿದ್ಧ ಅರ್ಥಶಾಸ್ತ್ರಜ್ಞ, ಶಿಕ್ಷಣ ತಜ್ಞ, ನಿಯಮನಿಷ್ಟ ಅಧಿಕಾರಿ ಮತ್ತು ರಾಜ್ಯನೀತಿಜ್ಞ ಡಾ. ಮನಮೋಹನ್ ಸಿಂಗ್, ಅವರ ಖ್ಯಾತಿಯನ್ನು ಗೌರವಿಸಲು "ಬೆಂಗಳೂರು ನಗರ ವಿಶ್ವವಿದ್ಯಾನಿಲಯ"ವನ್ನು "ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ" ಎಂದು ಮರುನಾಮಕರಣ ಮಾಡಲು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಡಾ. ಎಂ.ಸಿ. ಸುಧಾಕರ್**
ಉನ್ನತ ಶಿಕ್ಷಣ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ
## ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ (2001ರ ಕರ್ನಾಟಕ ಅಧಿನಿಯಮ ಸಂಖ್ಯೆ 29) ಉದ್ಧೃತ ಭಾಗ

**XXX XXX XXX**

## ಅಧ್ಯಾಯ II
## ವಿಶ್ವವಿದ್ಯಾನಿಲಯಗಳು

**3. ವಿಶ್ವವಿದ್ಯಾನಿಲಯಗಳ ಸ್ಥಾಪನೆ ಮತ್ತು ನಿಗಮನ.-**

**XXX XXX XXX**

(1ಎಫ್) ಬೆಂಗಳೂರು ಸೆಂಟ್ರಲ್ ಕಾಲೇಜು ಕ್ಯಾಂಪಸ್‌ನಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರುವ ಮತ್ತು ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು; ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ವ್ಯವಸ್ಥಾಪನಾ ಕಾಲೇಜು, ಬೆಂಗಳೂರು ಮತ್ತು ಶ್ರೀಮತಿ ವಿ.ಎಚ್.ಡಿ. ಕೇಂದ್ರೀಯ ಗೃಹವಿಜ್ಞಾನ ಸಂಸ್ಥೆ, ಬೆಂಗಳೂರು, ಸರ್ಕಾರಿ ವಿಜ್ಞಾನ ಕಾಲೇಜು (ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು, ಇವುಗಳನ್ನು ಹೊರತುಪಡಿಸಿ, ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಮಲ್ಲೇಶ್ವರಂ, ಹೆಬ್ಬಾಳ, ಶಿವಾಜಿನಗರ, ಗಾಂಧಿನಗರ, ಚಾಮರಾಜಪೇಟೆ, ಚಿಕ್ಕಪೇಟೆ, ಬಸವನಗುಡಿ, ಬಿಟಿಎಂ ಲೇಔಟ್, ಜಯನಗರ ಮತ್ತು ರಾಜಾಜಿನಗರವನ್ನು ಒಳಗೊಂಡಿರುವ ಪ್ರದೇಶಗಳ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯೊಂದಿಗೆ ಸಂಯೋಜನೆಗೊಳಿಸುವ ವಿಶ್ವವಿದ್ಯಾನಿಲಯವಾಗಿ (affiliating university) ಬೆಂಗಳೂರು ನಗರ ವಿಶ್ವವಿದ್ಯಾಲಯ ವನ್ನು ಸ್ಥಾಪಿಸತಕ್ಕದ್ದು.

**XXX XXX XXX**

**5. ಅಧಿಕಾರ ವ್ಯಾಪ್ತಿ, ವಿಶೇಷಾಧಿಕಾರ ಇತ್ಯಾದಿಗಳಿಗೆ ಪ್ರವೇಶಾವಕಾಶ.-**

**XXX XXX XXX**

(9) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2015ನ್ನು ಜಾರಿಗೊಳಿಸುವುದಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಮಲ್ಲೇಶ್ವರಂ, ಹೆಬ್ಬಾಳ, ಶಿವಾಜಿನಗರ, ಗಾಂಧಿನಗರ, ಚಾಮರಾಜಪೇಟೆ, ಚಿಕ್ಕಪೇಟೆ, ಬಸವನಗುಡಿ, ಬಿಟಿಎಂ ಲೇಔಟ್, ಜಯನಗರ ಮತ್ತು ರಾಜಾಜಿನಗರ ಇಲ್ಲಿರುವ ಕಾಲೇಜು ಅಥವಾ ಶೈಕ್ಷಣಿಕ ಸಂಸ್ಥೆಗಳು **ಬೆಂಗಳೂರು ವಿಶ್ವವಿದ್ಯಾನಿಲಯ**ದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು ಈ ಸಂಬಂಧದಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂಬು ಭಾವಿಸತಕ್ಕದ್ದು ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಎಲ್ಲ ಅಂಥ ಕಾಲೇಜುಗಳು ಅಥವಾ

ಶೈಕ್ಷಣಿಕ ಸಂಸ್ಥೆಗಳು ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿವೆ ಎಂದು ಭಾವಿಸತಕ್ಕದ್ದು.

**XXX XXX XXX**

(11) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2019ರ ಪ್ರಾರಂಭಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರವಾದ ಗಾಂಧಿನಗರದಲ್ಲಿ ಇರುವ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು, ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ವ್ಯವಸ್ಥಾಪನಾ ಕಾಲೇಜು, ಬೆಂಗಳೂರು ಮತ್ತು ಶ್ರೀಮತಿ ವಿ.ಎಚ್.ಡಿ ಕೇಂದ್ರೀಯ ಗೃಹ ವಿಜ್ಞಾನ ಸಂಸ್ಥೆ, ಬೆಂಗಳೂರು ಇವುಗಳು **ಬೆಂಗಳೂರು ನಗರ ವಿಶ್ವವಿದ್ಯಾನಿಲಯ**ದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು, ರಾಜ್ಯ ಸರ್ಕಾರವು ಈ ಸಂಬಂಧದಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು **ಬೆಂಗಳೂರು ನಗರ ವಿಶ್ವವಿದ್ಯಾನಿಲಯ**ದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು, ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ವ್ಯವಸ್ಥಾಪನಾ ಕಾಲೇಜು, ಬೆಂಗಳೂರು ಮತ್ತು ಶ್ರೀಮತಿ ವಿ.ಎಚ್.ಡಿ ಕೇಂದ್ರೀಯ ಗೃಹ ವಿಜ್ಞಾನ ಸಂಸ್ಥೆ, ಬೆಂಗಳೂರು ಇವುಗಳು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು ಅಥವಾ ವಿದ್ಯಾಲಯಗಳಾಗಿ ಸದರಿ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿದೆ ಎಂದು ಭಾವಿಸತಕ್ಕದ್ದು.

**XXX XXX XXX**

(14) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ಅಧಿನಿಯಮ, 2020ರ ಪ್ರಾರಂಭಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರವಾದ ಶಿವಾಜಿನಗರದಲ್ಲಿ ಇರುವ ಸರ್ಕಾರಿ ವಿಜ್ಞಾನ ಕಾಲೇಜು (ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು, ಇದು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು, ರಾಜ್ಯ ಸರ್ಕಾರವು ಈ ಸಂಬಂಧದಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಸರ್ಕಾರಿ ವಿಜ್ಞಾನ ಕಾಲೇಜು (ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು ಇದು ನೃಪತುಂಗ ವಿಶ್ವವಿದ್ಯಾನಿಲಯ, ಬೆಂಗಳೂರು, ಇದರ ಘಟಕ ಕಾಲೇಜು ಅಥವಾ ವಿದ್ಯಾಲಯಗಳಾಗಿ ಸದರಿ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿದೆ ಎಂದು ಭಾವಿಸತಕ್ಕದ್ದು.

**XXX XXX XXX**

**14. ಕುಲಪತಿ.- XXX XXX XXX**

(4) ಶೋಧನಾ ಸಮಿತಿಯು, ಖ್ಯಾತ ಶಿಕ್ಷಣ ತಜ್ಞರಾದ ಮೂರು ವ್ಯಕ್ತಿಗಳ ಒಂದು ಪಟ್ಟಿಯನ್ನು ಅಕಾರಾದಿ ಕ್ರಮದಲ್ಲಿ ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ಆ ಪಟ್ಟಿಯನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು, ಅವರು ಅರ್ಹತೆ, ಸಮದರ್ಶಿತ್ವ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಜ್ಯ ಸರ್ಕಾರದ ಸಹಮತಿಯೊಡನೆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಕ ಮಾಡತಕ್ಕದ್ದು:

ಪರಂತು, ಕುಲಾಧಿಪತಿಯವರು ಅವಶ್ಯವೆಂದು ಪರಿಗಣಿಸಿದರೆ ರಾಜ್ಯ ಸರ್ಕಾರದ ಸಹಮತಿಯೊಡನೆ ಎರಡನೆಯ ಪಟ್ಟಿಯನ್ನು ತರಿಸಿಕೊಳ್ಳಬಹುದು ಮತ್ತು ಶೋಧನಾ ಸಮಿತಿಯು ಎರಡನೆಯ ಪಟ್ಟಿಯನ್ನು ಸಲ್ಲಿಸತಕ್ಕದ್ದು ಹಾಗೂ ಅದು ಅಂತಿಮವಾಗಿರತಕ್ಕದ್ದು.

ಮತ್ತು ಪರಂತು, ಸಾಧ್ಯವಾದಷ್ಟು ಮಟ್ಟಿಗೆ ಒಬ್ಬ ಮಹಿಳೆಯೇ ಬಿಜಾಪುರದಲ್ಲಿರುವ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿಯಾಗತಕ್ಕದ್ದು:

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದೇನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ತುಮಕೂರು ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ ಮತ್ತು ರಾಣಿಚನ್ನಮ್ಮ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ರಾಯಚೂರು ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಮಂಡ್ಯ ವಿಶ್ವವಿದ್ಯಾನಿಲಯ, ಮಂಡ್ಯ ಇವುಗಳ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳು ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ಅಧಿನಿಯಮ, 2020 ಪ್ರಾರಂಭವಾದ ತರುವಾಯ ಮೂಲ ಅಧಿನಿಯಮದ ಅಡಿಯಲ್ಲಿ ಸ್ಥಾಪಿಸಲಾದ ಯಾವುದೇ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

**XXX XXX XXX**

**KARNATAKA LEGISLATIVE ASSEMBLY**

**SIXTEENTH LEGISLATIVE ASSEMBLY**

**SEVENTH SESSION**

# THE KARNATAKA STATE UNIVERSITIES (AMENDMENT) BILL, 2025

## (LA Bill No. 30 of 2025)

A Bill further to amend the Karnataka State Universities Act, 2000.

Whereas it is expedient further to amend the Karnataka State Universities Act, 2000 (Karnataka Act 29 of 2001) for the purposes hereinafter appearing:

Be it enacted by the Karnataka State Legislature in the Seventy Sixth year of the Republic of India as follows:-

**1.** Short title and Commencement.- (1) This Act may be called the Karnataka State Universities (Amendment) Act, 2025.

(2) It shall come into force at once.

**2. Substitution of expression**.- In the Karnataka State Universities Act, 2000 (Karnataka Act 29 of 2001), for the words "Bengaluru City University", wherever they occur, the letters and words "Dr. Manmohan Singh Bengaluru City University", shall be substituted.

## STATEMENT OF OBJECTS AND REASONS

It is considered necessary to amend the Karnataka State Universities Act, 2000 (Karnataka Act 29 of 2001) to change the nomenclature of the "Bengaluru City University" as "Dr.Manmohan Singh Bengaluru City University", to esteem the reputation of Dr. Manmohan Singh, distinguished economist, academician, bureaucrat and statesman who spearheaded economic reforms in the nation and served as Prime Minister of India for two successive terms.

Hence, the Bill.

**FINANCIAL MEMORANDUM**

There is no extra expenditure involved in the proposed legislative measure.

**Dr. M.C. SUDHAKAR**
Minister for Higher Education

**M.K. VISHALAKSHI**
Secretary
Karnataka Legislative Assembly

**ANNEXURE**
**EXTRACT FROM THE KARNATAKA STATE UNIVERSITIES ACT, 2000**
**(KARNATAKA ACT 29 OF 2001)**

**XXX XXXXXX**

**CHAPTER II**

**THE UNIVERSITIES**

**3. Establishment and Incorporation of Universities.-**

**XXX XXX XXX**

(1F) There shall be established the Bengaluru City University as an affiliating University with headquarters at Bengaluru Central College Campus with territorial jurisdiction comprising of the Karnataka Legislative Assembly Constituencies of Shanthinagar, Byatarayanapura, Yelahanka, Malleshwaram, Hebbal, ShivajiNagara Gandhinagar, Chamarajpet, Chickpet, Basavangudi, BTM Layout, Jayanagar and Rajajinagar of Bengaluru District except Maharani's Science College for Women, Bengaluru; Maharani's Women Arts, Commerce and Management College, Bengaluru and Smt. V.H.D. Central Institute of Home Science, Bengaluru and except Government Science College (Autonomous), Nrupathunga Road, Bengaluru.

**XXX XXX XXX**

**5. Jurisdiction, admission to privileges, etc.-**

**XXX XXX XXX**

(9) Any privilege enjoyed from the Bengaluru University by the college or educational institutions situated in the Karnataka Legislative Assembly Constituencies of Shanthinagar, Byatarayanapura, Yelahanka, Malleshwaram, Hebbal, Shivajinagar, Gandhinagar, Chamarajpet, Chickpet, Basavangudi, BTM Layout, Jayanagar and Rajajinagar of Bengaluru District before the commencement of the Karnataka State Universities (Amendment) Act, 2015 shall with effect from such date as may be specified by the State Government in this behalf, be deemed to be withdrawn and all such colleges or educational institutions previously admitted to the privileges of, or affiliated to Bengaluru University shall be deemed to be admitted to the privilege of, or affiliated, to the **Bengaluru City University**.

(11) Any privilege enjoyed from the **Bengaluru City University** by the Maharani's Science College for women, Maharani's Women Arts, Commerce and Management College, Bengaluru and Smt. V.H.D Central Institute of Home Science, Bengaluru, situated in the Karnataka Legislative Assembly Constituency of Gandhinagar, before the date of commencement of the Karnataka State Universities (Amendment) Act, 2019 shall, with effect from such date as may be specified by the State Government in this behalf, be deemed to be withdrawn and Maharani's Science College for Women, Maharani's Women Arts, Commerce and Management College, Bengaluru, Smt. V.H.D Central Institute of Home Science, Bengaluru previously admitted to the privileges of, or affiliated to, the **Bengaluru City University** shall be deemed to be admitted to the privileges of the Maharani Cluster University as constituent colleges or a schools of the said University.

(14) Any privilege enjoyed from the **Bengaluru City University** by the Government Science College (Autonomous), Nrupathunga Road, Bengaluru.situated in the Karnataka Legislative Assembly Constituency of ShivajiNagara, before the date of commencement of the Karnataka State Universities and certain other Law (Second Amendment) Act, 2020 shall, with effect from such date as may be specified by the State Government in this behalf, be deemed to be withdrawn and Government Science College (Autonomous), Nrupathunga Road, Bengaluru previously admitted to the privileges of, or affiliated to, the **Bengaluru City University** shall be deemed to be admitted to the privileges of the Nrupathunga University, Bengaluru as constituent college or a schools of the said University.

**XXX XXX XXX**

**14. The Vice-Chancellor.-XXX XXX XXX**

(4) The Search Committee shall submit to the State Government a panel of three persons who are eminent academicians, in the alphabetical order. The State Government shall forward the panel to the Chancellor who shall keeping in view merit, equity and social justice and with the concurrence of the State Government, appoint one person from the panel as the Vice-Chancellor:

Provided that the Chancellor may with the concurrence of the State Government call for a second panel if he considers it necessary and the Search Committee shall submit a second panel which shall be final.

Provided further that the Vice Chancellor of the Akkamahadevi Women University at Bijapur shall, as far as practicable be a women:

Provided also that notwithstanding anything contrary contained in this section the First Vice Chancellor of the Akkamahadevi Women University shall be appointed by the State Government subject to such terms and conditions as may be specified.

Provided also that notwithstanding anything contrary contained in this section, the first Vice Chancellor of the Tumkur University shall be appointed by the State Government subject to such terms and conditions as may be specified by it.

Provided also that notwithstanding anything contrary contained in this section, the first Vice-Chancellor of the Davanagere University shall be appointed by the State Government subject to such terms and conditions as may be specified by it.

Provided also that notwithstanding anything contrary contained in this section, the first Vice-Chancellors of the Vijayanagara Sri Krishnadevaraya University and Ranichannamma University shall be appointed by the State Government subject to such terms and conditions as may be specified by it.

Provided also that notwithstanding anything contrary contained in this section, first Vice-Chancellors of the Bengaluru City University and Bengaluru North University shall be appointed by the State Government subject to such terms and conditions as may be specified by it.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



Provided also that notwithstanding anything contrary contained in this section, first Vice-Chancellor of the Raichur University shall be appointed by the State Government subject to such terms and conditions as may be specified by it.

Provided also that, notwithstanding anything contrary contained in this section, first Vice-Chancellors of the Maharani Cluster University, Bengaluru and the Mandya University, Mandya shall be appointed by the State Government subject to such terms and conditions as may be specified by it.

Provided also that notwithstanding anything contrary contained in this section, first Vice-Chancellor of any University established under the Principal Act after the commencement of the Karnataka State Universities and certain other law (Second Amendment) Act, 2020 shall be appointed by the State Government subject to such terms and conditions as may be specified by it.

**XXX** **XXX** **XXX**

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH